<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.41/2023</u>

ದಿಃ 10.01.2025
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-6 Pw-4

| | | |
|---|---|---|
| ಹೆಸರು | ಃ | ಮಲವೇಗೌಡ |
| ತಂದೆಯ ಹೆಸರು | ಃ | ರಾಮೇಗೌಡ |
| ವಯಸ್ಸು | ಃ | 48 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ಅಮ್ಮಳ್ಳಿದೊಡ್ಡಿ, ಚನ್ನಪಟ್ಟಣ ತಾಲ್ಲೂಕು |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ಚಾಸಾ.1 ಈತನು ಪರಿಶಿಷ್ಟ ಜಾತಿಗೆ ಸಂಬಂಧಿಸಿದವನು ಇದ್ದು ನನಗೆ ಗೊತ್ತು.

2. ಅದರಂತೆ ನನಗೆ ಚಾಸಾ.2ರಿಂದ 5 ಸಹ ಗೊತ್ತು.

3. ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ಹಿಂದೂ ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದು ನನಗೆ ಗೊತ್ತು.

4. ಈ ಪ್ರಕರಣದಲ್ಲಿ ನನಗೇನೂ ಮಾಹಿತಿ ಇರುವುದಿಲ್ಲ.

5. ಪೊಲೀಸರು ನನ್ನನ್ನು ಯಾವ ಕಾಲಕ್ಕೂ ಯಾವುದೇ ರೀತಿಯಲ್ಲಿ ವಿಚಾರಣೆ ಮಾಡಿರುವುದಿಲ್ಲ ಮತ್ತು ನನ್ನಿಂದ ಯಾವುದೇ ಹೇಳಿಕೆಗಳನ್ನು ದಾಖಲಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

6. ಈಗ ನನಗೆ ಓದಿ ಹೇಳಿದ ನಿ.ಪಿ.4 ರಂತೆ, "ಸರ್ವೆ ನಂಬರ್.513 ರಲ್ಲಿ 1 ಎಕರೆ 20 ಗುಂಟೆ ಜಮೀನು ನಮ್ಮ ದೊಡ್ಡಪ್ಪವರಾದ ಚನ್ನೇಗೌಡರವರ ಹೆಸರಿನಲ್ಲಿರುತ್ತೆ, ಈ ಜಮೀನಿನಲ್ಲಿ ರಾಗಿ ಬೆಳೆಯನ್ನು ಬೆಳೆಯುತ್ತಿರುತ್ತೇವೆ

..........................................

..........................................

..........................................

..........................................

ನಷ್ಟ ಉಂಟು ಮಾಡಿರುವ ರಘು, ನಾಗೇಶ್‌ರವರ ಮೇಲೆ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕೆಂದು ಕೋರುತ್ತೇನೆ" ಎಂದು ದಿಃ17.10.2022 ರಂದು ಪೊಲೀಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆಂದು ಸೂಚಿಸುವುದು ಸರಿಯಲ್ಲ.

7. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ. ಕೆ.ಸಿ.ಎಂ., ವಕೀಲರಿಂದ ಆರೋಪಿಗಳ ಪರವಾಗಿಃ ಏನೂ ಇಲ್ಲವೆಂದು ತಿಳಿಸಿರುತ್ತಾರೆ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.